# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಕಾರ್ಯಪಾಲಕ ಅಭಿಯಂತರರ ಕಛೇರಿ ಕಟ್ಟಡ ಜಯಂತಿ ನಗರ ವೃತ್ತ ಹೊರಮಾವು/ಕಲ್ಕೆರೆ ಮುಖ್ಯರಸ್ತೆ, ಹೊರಮಾವು ಗ್ರಾಮ, ಬೆಂಗಳೂರು- 560113

ಸಂಖ್ಯೆ:ಬಿಬಿಎಂಪಿ/ಸ.ಕಾ.ಅ/ಹೊಉವಿ/ಪಿಆರ್/ ೪ /2022-23 ದಿನಾಂಕ: 25.04.2022

## ದಿನಾಂಕ-25.04.2022 ರಂದು ನಡೆದಿರುವ ವಿಜಿನಾಪುರ ವಾರ್ಡ್ ಸಂಖ್ಯೆ-51 ರ ವಾರ್ಡ್ ಸಮಿತಿ ಸಭೆ ನಡುವಳಿಗಳು

| ಸದಸ್ಯರ ಹೆಸರು ಮತ್ತು ಪದನಾಮ | | ಸದಸ್ಯರ ಹಾಜರು/ಗೈರು ಹಾಜರು |
|---|---|---|
| 1 | ಶ್ರೀಮತಿ.ತ್ರಿವೇಣಿ (ಅಧ್ಯಕ್ಷರು) | ಹಾಜರು |
| 2 | ಶ್ರೀ.ನಾಗಭೂಷಣ, ಸಹಾಯಕ ಅಭಿಯಂತರರು (ವಾರ್ಡ್ ನಂ.51) (ಕಾರ್ಯದರ್ಶಿ) | ಹಾಜರು |
| 3 | ಶ್ರೀ.ರಾಜಣ್ಣ (ಹಿ.ಆ.ಪ) ವಾರ್ಡ್ ನಂ.51 | ಹಾಜರು |
| 4 | ಶ್ರೀ.ಮಧು (ಕಿ.ಆ.ಪ) ವಾರ್ಡ್ ನಂ.51 | ಹಾಜರು |
| 5 | ಶ್ರೀ.ಮಂಜುನಾಥ ಬಡಿಗೇರ್ (ಕಂದಾಯ ಪರಿವೀಕ್ಷಕರು) | ಹಾಜರು |
| 6 | ಶ್ರೀ.ಸಂಜೀವಯ್ಯ (ಪಿ.ಎಸ್.ಐ, ಟ್ರಾಫಿಕ್) | ಹಾಜರು |
| 7 | ಶ್ರೀ.ಕಿರಣ್‌ಕುಮಾರ್ (ಬೆಸ್ಕಾಂ) | ಹಾಜರು |
| 8 | ಶ್ರೀ.ಡಿ.ವಿ.ಮೋಹನ್ ಲೈವ್ ಸ್ಟಾಕ್ ಆಫೀಸರ್ | ಹಾಜರು |
| 9 | ಶ್ರೀ.ಶಿವರಾಮ್ (ಈಸ್ಟ್ ಆಫ್ ಎನ್.ಜಿ.ಇ.ಎಫ್ ಕ್ಷೇಮಾಭಿವೃದ್ಧಿ ಸಂಘ) | ಹಾಜರು |
| 10 | ಶ್ರೀ.ಶ್ರೀಕಾಂತ್ | ಹಾಜರು |
| 11 | ಶ್ರೀ.ಬಷೀರ್ ಅಹಮದ್, ಬಿ.ಡಿ.ಎ. ಲೇಔಟ್ | ಹಾಜರು |

ದಿನಾಂಕ-25.04.2022 ರಂದು ಪೂರ್ವಾಹ್ನ: 11.30 ಗಂಟೆ ಸಮಯದಲ್ಲಿ ಸಭೆಯನ್ನು ಪ್ರಾರಂಭಿಸಲಾಯಿತು. ಮೊದಲನೆಯನದಾಗಿ ಶ್ರೀಮತಿ.ತ್ರಿವೇಣಿ ಅಧ್ಯಕ್ಷರು ರವರು ಸಭೆಯಲ್ಲಿ ಹಾಜರಿರುವ ಸದಸ್ಯರುಗಳು ಮತ್ತು ಅಧಿಕಾರಿ ವೃಂಧದವರಿಗೆಲ್ಲಾ ಸ್ವಾಗತಕೋರಿದರು. ತದನಂತರ ಈ ಕೆಳಕಂಡ ವಿಷಯಗಳ ಬಗ್ಗೆ ಈ ಸಭೆಯಲ್ಲಿ ಚರ್ಚಿಸಲಾಯಿತು.

1. ಶ್ರೀ.ಬಷೀರ್ ಅಹಮದ್, ಬಿ.ಡಿ.ಎ. ಲೇಔಟ್ ರವರು ಮಾತನಾಡಿ ಎಸ್.ಪಿ.ನಾಯ್ಡು ಬಡಾವಣೆಯಲ್ಲಿ ವಿದ್ಯುತ್ ವ್ಯತ್ಯಯವಾಗುತ್ತಿರುತ್ತದೆ ಇದರಿಂದ ಸಾರ್ವಜನಿಕರಿಗೆ ಮತ್ತು ಸಣ್ಣ-ಸಣ್ಣ ಕೈಗಾರಿಕೆಗಳಿಗೆ ತೊಂದರೆಯಾಗುತ್ತಿರುತ್ತದೆ. ಹಾಗೂ ಪಾರ್ಕ್ ರಸ್ತೆಯಲ್ಲಿ ಸರಕು ಸಾಗಾಣಿಕ ವಾಹನಗಳು ರಸ್ತೆಯಲ್ಲಿ ನಿಲುಗಡೆ ಮಾಡಿರುತ್ತಾರೆ. ಆದುದರಿಂದ ಸಾರ್ವಜನಿಕರ ವಾಹನ ಸಂಚಾರಕ್ಕೆ ತೊಂದರೆಯಾಗುತ್ತಿರುತ್ತದೆ ಇದರ ಬಗ್ಗೆ ಕ್ರಮ ವಹಿಸಬೇಕೆಂದು ಸಭೆಯಲ್ಲಿ ಕೋರಿದರು.

**ಕ್ರಮ:-** ಸಭೆಯಲ್ಲಿ ಹಾಜರಿದ್ದ ಸಹಾಯಕ ಅಭಿಯಂತರರು (ವಿದ್ಯುತ್) ರವರಿಗೆ ಮತ್ತು ಸಭೆಯಲ್ಲಿ ಹಾಜರಿದ್ದ ಟ್ರಾಫಿಕ್ ಪೋಲೀಸ್ ರವರಿಗೆ ಅಗತ್ಯ ಕ್ರಮವಹಿಸಲು ಸಭೆಯು ಸೂಚಿಸಿತು.

2. ಶ್ರೀ.ಶಿವರಾಮನ್ ರವರು ಮಾತನಾಡುತ್ತಾ, ಬಿಡಿಎ ಲೇಔಟ್‌ನಲ್ಲಿರುವ 3ನೇ ಎ ಮುಖ್ಯರಸ್ತೆಯಲ್ಲಿ ಬೀದಿದೀಪಗಳ ಸಮಸ್ಯೆ ಇರುತ್ತದೆ. ಇದರಿಂದ ಸಾರ್ವಜನಿಕರಿಗೆ ಹಾಗೂ ವಾಹನ ಸಂಚಾರಕ್ಕೆ ತೊಂದರೆಯಾಗುತ್ತಿರುತ್ತದೆ. ಆದುದರಿಂದ ಇದರ ಬಗ್ಗೆ ಕ್ರಮ ವಹಿಸಲು ಸಭೆಯಲ್ಲಿ ಕೋರಿದರು.

ಕ್ರಮ:- ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೀದಿ ದೀಪಗಳ ನಿರ್ವಹಣೆ, ಕೆ.ಆರ್.ಪುರ ರವರಿಗೆ ಅಗತ್ಯ ಕ್ರಮವಹಿಸಲು ಸಭೆಯು ಸೂಚಿಸಿತು.

3. ಶ್ರೀ.ಶ್ರೀಕಾಂತ್ ರವರು ಮಾತನಾಡಿ ವಿಜಿನಾಪುರ ವಾರ್ಡ್ ವ್ಯಾಪ್ತಿಯಲ್ಲಿ ಸಿಸಿ ಟಿವಿ ಕ್ಯಾಮೆರಾ ಅಳವಡಿಸಿರುವ ಸ್ಥಳಗಳ ವಿವರಗಳನ್ನು ನೀಡಲು ಮತ್ತು ಸರಿಯಾಗಿ ನಿರ್ವ
ಹಣೆ ಮಾಡಬೇಕೆಂದು ಸಭೆಯಲ್ಲಿ ಕೋರಿದರು.

ಕ್ರಮ:- ಸಂಬಂಧಪಟ್ಟ ಅಧಿಕಾರಿಗಳಿಗೆ ಅಗತ್ಯ ಕ್ರಮವಹಿಸಬೇಕೆಂದು ಸಭೆಯಲ್ಲಿ ತಿಳಿಸಿದರು.

ಸಭೆಯನ್ನು ಮುಕ್ತಾಯಗೊಳಿಸುವ ಸಲುವಾಗಿ ಕೊನೆಯದಾಗಿ ಅಧ್ಯಕ್ಷರು ರವರು ಸಲಹೆ ಸೂಚನೆಗಳನ್ನು ಚರ್ಚಿಸಿದ್ದಕ್ಕೆ ಧನ್ಯವಾದಗಳನ್ನು ತಿಳಿಸುತ್ತಾ, ವಾರ್ಡ್‌ನ್ನು ಅಭಿವೃದ್ಧಿಪಡಿಸುವ ಬಗ್ಗೆ ವಾರ್ಡ್ ಮಟ್ಟದಲ್ಲಿ ಕಾರ್ಯ ಯೋಜನೆಯನ್ನು ರೂಪಿಸಿಕೊಂಡು ಕ್ರಮವಹಿಸುವುದಾಗಿ ತಿಳಿಸುತ್ತಾ, ಸಭೆಗೆ ಹಾಜರಾಗದ ಅಧಿಕಾರಿಗಳ ವಿರುದ್ಧ ಅಸಮಧಾನ ವ್ಯಕ್ತಪಡಿಸಿ ಮುಂದಿನ ಸಭೆಯಲ್ಲಿ ಎಲ್ಲರೂ ಹಾಜರಾಗಲೂ ಕ್ರಮಕೈಗೊಳ್ಳಲು ಕೋರಿಕೊಂಡಿದ್ದು, ಸಭೆಯನ್ನು ಮುಕ್ತಾಯಗೊಳಿಸುವ ಸಲುವಾಗಿ ಕೊನೆಯದಾಗಿ ಸಭೆಯಲ್ಲಿ ನುರಿತ ಸಲಹೆ ಸೂಚನೆಗಳನ್ನು ಚರ್ಚಿಸಿದ್ದಕ್ಕೆ ಧನ್ಯವಾದಗಳನ್ನು ತಿಳಿಸುತ್ತಾ, ವಾರ್ಡ್‌ನ್ನು ಸಮಗ್ರವಾಗಿ ಅಭಿವೃದ್ಧಿಪಡಿಸುವ ಬಗ್ಗೆ ವಾರ್ಡ್ ಮಟ್ಟದಲ್ಲಿ ಕಾರ್ಯಯೋಜನೆಯನ್ನು ರೂಪಿಸಿಕೊಂಡು ಕ್ರಮವಹಿಸುವುದಾಗಿ ತಿಳಿಸುತ್ತಾ, ವಂದನೆಗಳೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಿದರು.

Kmagesh Murthy 25/11/22
**ವಾರ್ಡ್ ಸಮಿತಿ ಕಾರ್ಯದರ್ಶಿಗಳು,**
**ವಾರ್ಡ್ ನಂ.51, ವಿಜಿನಾಪುರ**